ನಿರ್ದೇಶಕರ ಕಛೇರಿ
ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618.
Web: www.gokdom.com
20ನೇ ಮಹಡಿ, ವಿ.ವಿ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ-: ಅಸಂನಿ/ವಿ.ವೇ/ಡಿಬಿ/ಸಿ.ಆರ್-04/2021-22 ದಿನಾಂಕ:-16.09.2021

ಗೆ,
ಕುಲಸಚಿವರು
ತುಮಕೂರು ವಿಶ್ವವಿದ್ಯಾಲಯ
ತುಮಕೂರು

**ಜರೂರು**

**ವಿಷಯ:-** ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 2021-22 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನಲ್ಲಿ ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನದ ಅನುಷ್ಠಾನದ ಬಗ್ಗೆ.

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವತಿಯಿಂದ ಕೇಂದ್ರ ಸರ್ಕಾರ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡುವ ಮೆಟ್ರಿಕ್-ನಂತರ ಹಾಗೂ ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನ ಯೋಜನೆಯನ್ನು ಅನುಷ್ಠಾನಗೊಳಿಸಲು ತಮ್ಮ ವಿಶ್ವವಿದ್ಯಾಲಯದ ಅಧೀನದ ಕಾಲೇಜುಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನೀಡುತ್ತಿರುವ ಸಹಾಯ ಮತ್ತು ಸಹಕಾರಕ್ಕೆ ಅಲ್ಪಸಂಖ್ಯಾತರ ಇಲಾಖೆಯು ಅಭಿನಂದನೆ ಸಲ್ಲಿಸುತ್ತಿದೆ.

ನಿಮ್ಮ ವಿಶ್ವವಿದ್ಯಾಲಯದ ಸಹಕಾರದಿಂದ ಹೆಚ್ಚಿನ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮತ್ತು ಜಾರಿಗೊಳಿಸಲು ಮತ್ತು ನೀಡಲು ಸಹಾಯವಾಗಿರುತ್ತದೆ.ಇದರಿಂದಾಗಿ ಕರ್ನಾಟಕ ರಾಜ್ಯವು ಭಾರತ ದೇಶದ ವಿದ್ಯಾರ್ಥಿವೇತನ ಯೋಜನೆ ಅನುಷ್ಠಾನ ಕಾರ್ಯದಲ್ಲಿ ಮುಂಚೂಣಿಯಲ್ಲಿರುತ್ತದೆ.ಈ ದಿಶೆಯಲ್ಲಿ ತಮ್ಮ ವಿಶ್ವವಿದ್ಯಾನಿಲಯಕ್ಕೆ ಅಲ್ಪಸಂಖ್ಯಾತರ ಇಲಾಖೆಯು ಕೃತಜ್ಞತೆಯನ್ನು ಸಲ್ಲಿಸುತ್ತಿದೆ.

2021-22ನೇ ಸಾಲಿಗೂ ಸಹ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಈ ವಿದ್ಯಾರ್ಥಿವೇತನ ಯೋಜನೆಯನ್ನು ಅಲ್ಪಸಂಖ್ಯಾತರ ನಿರ್ದೇಶನಾಲಯವು ಹಮ್ಮಿಕೊಂಡಿದ್ದು, ಇದರ ಅನುಷ್ಠಾನಕ್ಕೆ ತಮ್ಮ ವಿಶ್ವವಿದ್ಯಾನಿಲಯದ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಮುಖ್ಯವಾಗಿ ಪ್ರಾಂಶುಪಾಲರು ಈ ಹಿಂದಿನಂತೆ ಮುಖ್ಯ ಪಾತ್ರವಹಿಸಬೇಕಾಗಿರುತ್ತದೆ.ಈ ಕಾರ್ಯಕ್ರಮವನ್ನು ನಿಗದಿತ ಸಮಯದೊಳಗೆ ಕಾರ್ಯಗತ ಮಾಡಬೇಕಾಗಿದೆ.

ಈ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರ ವಿಧಿಸಿರುವ ನಿಯಮದಂತೆ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ 2021-22 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನ ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕವನ್ನು ದಿನಪತ್ರಿಕೆಗಳಲ್ಲಿ ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ದಿನಾಂಕ:-15.09.2021 ರಂದು ಪ್ರಕಟಿಸಲಾಗಿದೆ. ಪ್ರಕಟನೆಯ ಪ್ರತಿಯನ್ನು ಪತ್ರದೊಂದಿಗೆ ಲಗತ್ತಿಸಲಾಗಿದೆ.

ಪು.ತಿ.ನೋ

08/10/2021

ಆನ್‌ಲೈನ್ ಅರ್ಜಿಗಳ ಮಾನದಂಡಗಳು ಹಾಗೂ ಕಾಲೇಜು/ಶಿಕ್ಷಣ ಸಂಸ್ಥೆಗಳು ಕೈಗೊಳ್ಳ ಬೇಕಾದ ಈ ಕೆಳಗೆ ನಮೂದಿಸಿರುವ ಇರುತ್ತದೆ.

1. ಈ ಯೋಜನೆಯ ಬಗ್ಗೆ ತಮ್ಮ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಸೂಕ್ತ ಕ್ರಮ ವಹಿಸುವುದು.

2. ಅರ್ಜಿ ಸಲ್ಲಿಸುವ ವಿದ್ಯಾರ್ಥಿಯು ಕರ್ನಾಟಕ ರಾಜ್ಯದವರಾಗಿದ್ದು, ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ :-

- ಮೆಟ್ರಿಕ್-ನಂತರ ವಿದ್ಯಾರ್ಥಿವೇತನ ಯೋಜನೆಗೆ ಮಿತಿ ರೂ. 2.00 ಲಕ್ಷಕ್ಕೆ ಮೀರಿರಬಾರದು.
- ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನ ಯೋಜನೆಗೆ ಮಿತಿ ರೂ. 2.50 ಲಕ್ಷಕ್ಕೆ ಮೀರಿರಬಾರದು.

3. ಆನ್‌ಲೈನ್ ಅರ್ಜಿಗಳನ್ನು ಕಾಲೇಜು/ಶಿಕ್ಷಣ ಸಂಸ್ಥೆಗಳಲ್ಲಿ ಪರಿಶೀಲಿಸುವ ವಿಧಾನವನ್ನು ಈ ಪತ್ರದೊಂದಿಗೆ ಲಗ್ಗತ್ತಿಸಿದೆ ಹಾಗೂ ಇಲಾಖೆಯ ವೆಬ್‌ಸೈಟ್ *https://www.dom.karnataka.gov.in* ನಲ್ಲಿ ಪ್ರಕಟಿಸಲಾಗಿದೆ.ಈ ಬಗ್ಗೆ ಕಾಲೇಜು/ಶಿಕ್ಷಣ ಸಂಸ್ಥೆಗಳಿಗೆ ಮಾಹಿತಿ ನೀಡುವುದು.

4. ಕಾಲೇಜು/ಶಿಕ್ಷಣ ಸಂಸ್ಥೆಗಳು ಆನ್‌ಲೈನ್ ಮೂಲಕ KYC ನೋಂದಣಿ ಮಾಡುಕೊಳ್ಳುವಂತೆ ತಿಳಿಸುವುದು.ಇದರ ವಿಧಾನ ಮತ್ತು USER MANUAL ಅನ್ನು ಅಲ್ಪಸಂಖ್ಯಾತರ ಇಲಾಖೆಯ (*https://www.dom.karnataka.gov.in*) ಹಾಗೂ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP-*www.scholarships.gov.in*) ನ ಜಾಲತಾಣದಲ್ಲಿ ಲಭ್ಯವಿದೆ ಮತ್ತು ಈ ಪತ್ರದೊಂದಿಗೆ ಲಗ್ಗತ್ತಿಸಿಲಾಗಿದೆ.

16/9/21

**ನಿರ್ದೇಶಕರು**
**ಅಲ್ಪಸಂಖ್ಯಾತರ ನಿರ್ದೇಶನಾಲಯ**
**ಬೆಂಗಳೂರು**

**ಹೆಚ್ಚಿನ ಮಾಹಿತಿಗಾಗಿ ಮತ್ತು ತಾಂತ್ರಿಕ ತೊಂದರೆಗಳು ಇದ್ದಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯವನ್ನು ಸಂಪರ್ಕಿಸುವುದು.**

**ಇ-ಮೇಲ್:-gokdomnsp2122@gmail.com**

**ಮೊಬೈಲ್ ಸಂಖ್ಯೆ:- ಶ್ರೀಮತಿ. ಆಯೇಷಾ ಫಿರ್ದೋಸ್-+91-9731416943**

**ಟಿಪ್ಪಣಿ:-**

ಕರ್ನಾಟಕ ಸರ್ಕಾರದಿಂದ ವಿದ್ಯಾರ್ಥಿವೇತನವನ್ನು ಪಡೆಯಲು ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ಮತ್ತು ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (State Scholarship Portal-SSP) ಗಳಲ್ಲಿ ಅರ್ಜಿ ಸಲ್ಲಿಸುವುದು ಕಡ್ಡಾಯವಾಗಿದೆ.

ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (State Scholarship Portal-SSP) ನ ಬಗ್ಗೆ ಮಾಹಿತಿಯನ್ನು ನಂತರದಲ್ಲಿ ತಿಳಿಸಲಾಗುವುದು.